ಕರ್ನಾಟಕ ಸರಕಾರ

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ. ದಿನಾಂಕ:26.05.2012.

**ವಿಷಯ:** ಪುರಸಭೆ ಚಿಕ್ಕೋಡಿ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪುರಸಭೆ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು:**-1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012

2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಸುತ್ತೋಲೆ ಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012

3)ಮುಖ್ಯಾಧಿಕಾರಿ, ಪುರಸಭೆ ಚಿಕ್ಕೋಡಿ ಇವರ ಪತ್ರ ಸಂಖ್ಯೆ: ಪಪಂಸ:2012-13:36 ದಿನಾಂಕ:28.04.2012.

**ಪ್ರಸ್ತಾವನೆ:**

2012-13ನೇ ಸಾಲಿಗೆ ಚಿಕ್ಕೋಡಿ ಪುರಸಭೆಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ.73.39 ಲಕ್ಷಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಮುಖ್ಯಾಧಿಕಾರಿ, ಪುರಸಭೆ ಚಿಕ್ಕೋಡಿ ಇವರು ಪುರಸಭೆ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.5.32 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ. 2.20 ಲಕ್ಷಗಳಲ್ಲಿ 05 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಲಾಗಿ, ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.5.32 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.2.20 ಲಕ್ಷಗಳಲ್ಲಿ 05 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗೆ ಪ್ರಸ್ತಾಪಿಸಿದ್ದನ್ನು ಪರಿಗಣಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳ ಹೆಸರು | ಅಂದಾಜು ಮೊತ್ತ (ಲಕ್ಷ ಗಳಲ್ಲಿ) |
|---|---|---|
| *1* | *2* | *3* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು ಶೇ. 40%** | |
| | **ಶಿಕ್ಷಣ** | |
| | ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಇತರೆ ಬಡಜನರ ವಿದ್ಯಾರ್ಥಿಗಳಿಗೆ ವಿಶೇಷ ಆರ್ಥಿಕ ನೆರವು. | |
| 1 | ಎಸ್.ಎಸ್.ಎಲ್.ಸಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ವಿಶೇಷ ನೆರವು 2000*21 | 0.42 |
| 2 | ಪಿ.ಯು.ಸಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ವಿಶೇಷ ನೆರವು 3000*17 | 0.51 |
| | **ಉದ್ಯೋಗ** | |
| 3 | ಇತರೆ ಬಡಜನರಿಗೆ ಸಣ್ಣ ಉದ್ದಿಮೆದಾರರಿಗೆ ಸಹಾಯಧನ ನೀಡುವುದು. | 1.00 |
| 4 | ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡುವುದು. | 0.20 |
| | **ಸಮುದಾಯ ಸೌಲಭ್ಯಗಳು ಶೇ. 60%** | |
| | **ಶಿಕ್ಷಣ** | |
| 5 | ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯ ಚಿಕ್ಕೋಡಿ – ಪಿಠೋಪಕರಣ ಬಾಕ್ಸ್ ಕಬ್ಬೋರ್ಡ್, ಅಲ್ಮೇರಾ, ಟೇಬಲ ಖುರ್ಚಿಗಳನ್ನು ಪೂರೈಸುವುದು. | 0.96 |
| 6 | ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಚಿಕ್ಕೋಡಿ – ಸೋಲಾರ್ ವಾಟರ್ ಹಿಟರ್ ಅಳವಡಿಸುವುದು. | 2.23 |
| | **ಒಟ್ಟು** | **5.32** |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು ಶೇ. 40%** | |
| 1 | ವಿಕಲಚೇತನರಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ. | 0.20 |
| 2 | ವಿಕಲಚೇತನರಿಗೆ ಪಕ್ಕಾ ಮನೆ ನಿರ್ಮಾಣಕ್ಕಾಗಿ ಸಹಾಯಧನ. | 0.70 |
| | **ಸಮುದಾಯ ಸೌಲಭ್ಯಗಳು ಶೇ. 60%** | |
| 3 | ಕಾನೂನು ಮಂಡಳಿಯ ನೆರವಿನೊಂದಿಗೆ ಕಾನೂನು ಅರಿವು ಮೂಡಿಸುವ ಜಾಗ್ರುತಿ ಶಿಬಿರಗಳನ್ನು ಏರ್ಪಡಿಸಲು ಆರ್ಥಿಕ ನೆರವು ನೀಡುವುದು. | 0.20 |
| 4 | ಪುರಸಭೆ ವ್ಯಾಪ್ತಿಯಲ್ಲಿ ಬರುವ ಅಂಗವಿಕಲ ಸಂಸ್ಥೆಗಳಿಗೆ ಸಹಾಯಧನ. | 0.15 |
| 5 | ಪುರಸಭೆ ಕಾರ್ಯಾಲಯ ಹಾಗೂ ಪುರಸಭೆ ಸಮುದಾಯ ಭವನಕ್ಕೆ ಮತ್ತು ಸಾರ್ವಜನಿಕ ಕಛೇರಿಗಳಿಗೆ ಜಾರು ಹಾದಿ ನಿರ್ಮಿಸುವುದು. | 0.95 |
| | **ಒಟ್ಟು** | **2.20** |

## <u>ಆದೇಶ</u>

ಮೇಲಿನ ಪ್ರಸ್ತಾವನೆಯಂತೆ ಪುರಸಭೆ ಚಿಕ್ಕೋಡಿ ವ್ಯಾಪ್ತಿಯಲ್ಲಿ 2012–13ನೇ ಸಾಲಿನ ಪುರಸಭೆ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ. 5.32 ಲಕ್ಷಗಳಲ್ಲಿ 06 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ. 2.20 ಲಕ್ಷಗಳಲ್ಲಿ 05 ಕಾರ್ಯಕ್ರಮಗಳನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು

(1) ಹಾಗೂ (2)ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/-**

**(ವಿ. ಅನ್ಬುಕುಮಾರ)**

ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.

**ಪ್ರತಿ:**ಕಾರ್ಯಪಾಲಕ ಅಭಿಯಂತರರು/ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ.

**ಪ್ರತಿ:**ಮುಖ್ಯಾಧಿಕಾರಿಗಳು, ಪುರಸಭೆ ಚಿಕ್ಕೋಡಿ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/-**

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ